## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಂಡ್ಯ ಜಿಲ್ಲಾ ಸರ್ಕಾರಿ ನೌಕರರ ಸಮುದಾಯ ಭವನ ನಿರ್ಮಾಣಕ್ಕೆ ಜಿಲ್ಲೆಯ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರ ಒಂದು ದಿನದ ವೇತನವನ್ನು ಕಟಾಯಿಸಿ ವಂತಿಗೆಯಾಗಿ ನೀಡುವ ಬಗ್ಗೆ

ಓದಲಾಗಿದೆ:

1) ಸರ್ಕಾರಿ ಆದೇಶ ಸಂಖ್ಯೆ: ಆಇ 7 ಎಸ್.ಆರ್.ಪಿ2019, ದಿನಾಂಕ: 07.11.2019

2) ಪತ್ರ ಸಂಖ್ಯೆ: MDC-RHAOEST5/4/2020-ACT-DCMANDYA, date:20.01.2020

**ಪ್ರಸ್ತಾವನೆ:**

ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳ ಕೋರಿಕೆಯಂತೆ ಮಂಡ್ಯ ಜಿಲ್ಲಾ ಸರ್ಕಾರಿ ನೌಕರರ ಸಮುದಾಯ ಭವನ ನಿರ್ಮಾಣಕ್ಕೆ ಮಂಡ್ಯ ಜಿಲ್ಲಾ ಸರ್ಕಾರಿ ಅಧಿಕಾರಿ/ನೌಕರರ ಒಂದು ದಿನದ ವೇತನವನ್ನು ಕಟಾಯಿಸಲು ದಿನಾಂಕ 07.11.2019ರ ಆದೇಶ ಹೊರಡಿಸಲಾಗಿರುತ್ತದೆ.

ಈ ಬಗ್ಗೆ ಮೇಲೆ ಓದಲಾದ ಉಲ್ಲೇಖ (2)ರ ಪತ್ರದಲ್ಲಿ ಸರ್ಕಾರಕ್ಕೆ ಪುನಃ ಪ್ರಸ್ತಾವನೆ ಸಲ್ಲಿಸಿರುವ ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಖಜಾನೆ-2 ತಂತ್ರಾಂಶದ ಅಳವಡಿಕೆಯಲ್ಲಿನ ಸಮಸ್ಯೆಗಳಿಂದಾಗಿ ಮಂಡ್ಯ ಜಿಲ್ಲೆಯ ಎಲ್ಲಾ ಅಧಿಕಾರಿ/ನೌಕರರ ಒಂದು ದಿನದ ವೇತನ ಕಟಾವಣೆ ಪ್ರಕ್ರಿಯೆ ಪೂರ್ಣಗೊಂಡಿರುವುದಿಲ್ಲ. ಆದುದರಿಂದ ಉಳಿದ ನೌಕರರಿಂದ ವೇತನ ವಂತಿಗೆ ಸಂಗ್ರಹಿಸಲು ಅಂತಹ ನೌಕರರ ಒಂದು ದಿವಸದ ವೇತನವನ್ನು ಫೆಬ್ರವರಿ ತಿಂಗಳಲ್ಲಿ ಕಟಾಯಿಸಲು ಅನುವಾಗುವಂತೆ ದಿನಾಂಕ 07 ನೇ ನವೆಂಬರ್ 2019ರ ಆದೇಶಕ್ಕೆ ಸೂಕ್ತ ತಿದ್ದುಪಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಸೇರ್ಪಡೆ ಆದೇಶ ಹೊರಡಿಸಿದೆ.

**ಸೇರ್ಪಡೆ ಆದೇಶ ಸಂಖ್ಯೆ: ಆಇ 7 ಎಸ್‌ಆರ್‌ಪಿ 2019,**
**ಬೆಂಗಳೂರು, ದಿನಾಂಕ: 03ನೇ ಫೆಬ್ರವರಿ 2020**

ದಿನಾಂಕ 07.11.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 07 ಎಸ್‌ಆರ್‌ಪಿ 2019ರ ಆದೇಶ ಭಾಗದ ಕಂಡಿಕೆ (2)ರ ನಂತರ ಈ ಕೆಳಗಿನ ಕಂಡಿಕೆ & ಪದಗಳನ್ನು ಸೇರ್ಪಡೆ ಮಾಡುವುದು.

(i) ಈ ಮೇಲಿನ ಕಂಡಿಕೆ(2)(ಅ)ರಲ್ಲಿನ ಅವಕಾಶಗಳನ್ವಯ ಮಂಡ್ಯ ಜಿಲ್ಲೆಯ ಯಾವ ಸರ್ಕಾರಿ ಅಧಿಕಾರಿ/ನೌಕರರ ವೇತನವನ್ನು ಈ ಮೊದಲು ಕಟಾವು ಮಾಡಿರುವುದಿಲ್ಲವೋ ಅಂತಹ ಅಧಿಕಾರಿ ನೌಕರರ ಒಂದು ದಿವಸದ ವೇತನ ವಂತಿಗೆಯನ್ನು 2020ರ ಫೆಬ್ರವರಿ ಮಾಹೆಯ ವೇತನ ಬಿಲ್ಲಿನಲ್ಲಿ ಕಟಾವುಗೊಳಿಸಲು ಆಯಾ ಕಛೇರಿ ಮುಖ್ಯಾಧಿಕಾರಿಗಳು ಮತ್ತು ಖಜಾನಾಧಿಕಾರಿಗಳು ಅಧಿಕಾರ ಪಡೆದಿರುತ್ತಾರೆ.

(ii) ಕಂಡಿಕೆ 2(ಉ)ರಲ್ಲಿ ಬರುವ "2019ರ ನವೆಂಬರ್ ತಿಂಗಳಿನಲ್ಲಿ ಸ್ವೀಕರಿಸಲಾದ ವೇತನ ಬಿಲ್ಲುಗಳ ನಿರ್ವಹಣೆಯನ್ನು 2019ರ ಡಿಸೆಂಬರ್ 31ನೇ ದಿನಾಂಕದೊಳಗೆ"" ಪದಗಳ ನಂತರ ಈ ಕೆಳಗಿನ ಪದಗಳನ್ನು ಸೇರ್ಪಡೆ ಮಾಡುವುದು.

"ಮತ್ತು 2020ನೇ ಫೆಬ್ರವರಿ ತಿಂಗಳಿನಲ್ಲಿ ಸ್ವೀಕರಿಸಲಾದ ವೇತನ ಬಿಲ್ಲುಗಳ ನಿರ್ವಹಣೆಯನ್ನು 2020ರ ಏಪ್ರಿಲ್ 30ನೇ ದಿನಾಂಕದೊಳಗೆ ಪೂರೈಸಬೇಕು"

2. ಈ ಆದೇಶಗಳು ತಕ್ಷಣದಿಂದ ಜಾರಿಗೆ ಬರುತ್ತದೆ.

3. ದಿನಾಂಕ 07.11.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 7 ಎಸ್‌ಆರ್‌ಪಿ 2019ರಲ್ಲಿನ ಇತರೆ ಷರತ್ತುಗಳು ಮುಂದುವರಿದು ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
4. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
7. ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯಾಲಯ, ಮಂಡ್ಯ.
9. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆ, ಮಂಡ್ಯ.
10. ಖಜಾನೆ ಅಧಿಕಾರಿ, ಖಜಾನೆ-1/ಖಜಾನೆ-2
11. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿಸಂಖ್ಯೆ:145 'A', ಬಹುಮಹಡಿಗಳಕಟ್ಟಡ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನ, ಬೆಂಗಳೂರು.
14. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ, ಮಂಡ್ಯ.
15. ವಾರ ಪತ್ರ / ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ https://www.finance.karnataka.gov.in ವೀಕ್ಷಿಸಿ